# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** **ದಿನಾಂಕ:15.06.2020**

**<u>ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ಅಡಿ ನಡೆಯುತ್ತಿರುವ ಕಾಮಗಾರಿಗಳ ಕುರಿತು ಸಭೆ:</u>**



ಬಿಬಿಎಂಪಿ ವ್ಯಾಪ್ತಿಯಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವತಿಯಿಂದ ಕೈಗೆತ್ತಿಕೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು/ಯೋಜನೆಗಳ ಕುರಿತು ಪೂಜ್ಯ ಮಹಾಪೌರರು ರವರ ಅಧ್ಯಕ್ಷತೆಯಲ್ಲಿ ಇಂದು ಸ್ಮಾರ್ಟ್ ಸಿಟಿ ಕಛೇರಿಯಲ್ಲಿ ನಗರ ಮಟ್ಟದ ಸಲಹಾ ವೇದಿಕೆ ಸಭೆ(City Level Advisory Forum Meeting) ನಡೆಯಿತು. ಈ ವೇಳೆ ಮಾನ್ಯ ಸಂಸದರು ಶ್ರೀ ಪಿ.ಸಿ.ಮೋಹನ್, ಮಾನ್ಯ ಶಾಸಕರುಗಳಾದ ಶ್ರೀ ದಿನೇಶ್ ಗುಂಡೂರಾವ್, ಶ್ರೀ ಬಿ.ಝೆಡ್.ಜಮೀರ್ ಅಹ್ಮದ್ ಖಾನ್, ಶ್ರೀ ರಿಜ್ವಾನ್ ಹರ್ಷದ್, ಬೆಂಗಳೂರು ಸ್ಮಾರ್ಟ್ ಸಿಟಿ ವ್ಯವಸ್ಥಾಪಕ ನಿರ್ದೇಶಕರು ಶ್ರೀಮತಿ ಹೆಪ್ಸಿಬಾ ರಾಣಿ ಕೊರ್ಲಪಾಟಿ, ಮುಖ್ಯ ಅಭಿಯಂತರರು(ಸ್ಮಾರ್ಟ್ ಸಿಟಿ) ಶ್ರೀ ಶ್ರೀನಿವಾಸ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ಅಡಿ ಕೈಗೆತ್ತಿಕೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯಕ ಸಿಬ್ಬಂದಿಯನ್ನು ನಿಯೋಜನೆ ಮಾಡಿಕೊಂಡು, ನಿಗದಿತ ಸಮಯದಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಪೂಜ್ಯ ಮಹಾಪೌರರು ಸ್ಮಾರ್ಟ್ ಸಿಟಿ ಲಿ. ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಸ್ಮಾರ್ಟ್ ಸಿಟಿ ಯೋಜನೆಯಡಿ ಟೆಂಡರ್ ಶ್ಯೂರ್ ಮಾದರಿಯಲ್ಲಿ ಕೈಗೆತ್ತಿಕೊಂಡಿರುವ 36 ರಸ್ತೆಗಳ ಪೈಕಿ, ಸದ್ಯ ನಡೆಯುತ್ತಿರುವ ಕಾಮಗಾರಿಗಳ ಬಳಿ ಅವಶ್ಯಕ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡು, ಸಮರ್ಪಕವಾಗಿ ಬ್ಯಾರಿಕೇಡ್‌ಗಳನ್ನು ಅಳವಡಿಸುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಬೇಕು ಎಂದು ತಿಳಿಸಿದರು.

ಕೆ.ಆರ್.ಮಾರುಕಟ್ಟೆಯನ್ನು ಸ್ಮಾರ್ಟ್ ಸಿಟಿ ಯೋಜನೆಯಡಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ತ್ವರಿತವಾಗಿ ಟೆಂಡರ್ ಕರೆದು ಕಾಮಗಾರಿ ಕೈಗೆತ್ತಿಕೊಳ್ಳುವಂತೆ ಸೂಚನೆ ನೀಡಲಾಗಿದೆ. ಈ ವೇಳೆ ಕೆ.ಆರ್ ಮಾರುಕಟ್ಟೆ ಜಂಕ್ಷನ್ ಅನ್ನು ಅಭಿವೃದ್ಧಿಗೊಳಿಸುವ ಬಗ್ಗೆ ವಿಷಯ ಪ್ರಸ್ತಾಪಿಸಿದ ಬೆಂಗಳೂರು ಸ್ಮಾರ್ಟ್ ಸಿಟಿ ವ್ಯವಸ್ಥಾಪಕ ನಿರ್ದೇಶರು, ಕೆ.ಆರ್.ಮಾರುಕಟ್ಟೆ ಜಂಕ್ಷನ್ ಅನ್ನು ಉನ್ನತ ಮಾದರಿಯಲ್ಲಿ ಅಭಿವೃದ್ಧಿ ಪಡಿಸುವ ಉದ್ದೇಶದಿಂದ ಈಗಾಗಲೇ ಸ್ಥಳ ತನಿಖೆ ಮಾಡಿ ಸಮೀಕ್ಷೆ ನಡೆಸಿ ನೀಲನಕ್ಷೆ ಸಿದ್ಧಪಡಿಸಲಾಗಿದೆ. ಈ ಪೈಕಿ ಬಿಎಂಟಿಸಿ ಬಸ್ ಸಂಚರಿಸುವ ಸ್ಥಳ, ಆಟೋ ನಿಲ್ದಾಣ, ಪಾದಚಾರಿ ಮಾರ್ಗ ಸೇರಿದಂತೆ ಖಾಲಿ ಜಾಗವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**